**National**
**Kannada**
**14.02.2026 7.35 pm**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಪ್ರಧಾನಿ ನರೇಂದ್ರ ಮೋದಿ ಅವರಿಂದ ಅಸ್ಸಾಂನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಲೋಕಾರ್ಪಣೆ

೨. ಒಂದು ಲಕ್ಷ ಕೋಟಿ ರೂಪಾಯಿ ಕೇಂದ್ರೀಯ ನೆರವಿನ ನಗರ ಸವಾಲು ನಿಧಿ ಆರಂಭಕ್ಕೆ ಸಚಿವ ಸಂಪುಟ ಸಭೆ ಒಪ್ಪಿಗೆ

೩. ಹವಾಮಾನ ಸಕ್ರಿಯತೆಗೆ ಹೆಚ್ಚಿನ ನಿಧಿ; ಭಾರತದ ಬದ್ಧತೆ - ಸಚಿವೆ ನಿರ್ಮಲಾ ಸೀತಾರಾಮನ್

೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಇಂದಿನ ಪಂದ್ಯಗಳಲ್ಲಿ ಐರ್ಲೆಂಡ್ ಮತ್ತು ಇಂಗ್ಲೆಂಡ್ ಗೆ ಜಯ; ನ್ಯೂಜಿಲೆಂಡ್ - ದಕ್ಷಿಣ ಆಫ್ರಿಕಾ ಮುಖಾಮುಖಿ

**<><><*><><<>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅಸ್ಸಾಂನಲ್ಲಿಂದು ೫ ಸಾವಿರದ ೪೫೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿದರು. ಗುವಾಹತಿ ಮತ್ತು ಉತ್ತರ ಗುವಾಹತಿ ನಡುವೆ ಸಂಪರ್ಕ ಕಲ್ಪಿಸಲು ಬ್ರಹ್ಮಪುತ್ರ ನದಿಗೆ ಅಡ್ಡಲಾಗಿ ನಿರ್ಮಿಸಲಾಗಿರುವ 'ಕುಮಾರಬಾಸ್ಕರ್ ವರ್ಮಾ' ಸೇತುವೆಯನ್ನು ಉದ್ಘಾಟಿಸಿದರು. ಸುಮಾರು ೩ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಸೇತುವೆಯನ್ನು ನಿರ್ಮಿಸಲಾಗಿದೆ. ನಂತರ ಪ್ರಧಾನಿ ಅವರು ಲಚಿತ್‌ಘಾಟ್‌ಗೆ ತೆರಳಿ, ಐಐಎಂ ಗುವಾಹತಿಯ ತಾತ್ಕಾಲಿಕ ಕ್ಯಾಂಪಸ್ ಅನ್ನು ಹಾಗೂ ಕಾಮರೂಪ್ ಜಿಲ್ಲೆಯ ಅಮಿಂಗಾಂವ್ ನ ರಾಷ್ಟ್ರೀಯ ದತ್ತಾಂಶ ಕೇಂದ್ರವನ್ನು ವರ್ಚುವಲ್ ಮೂಲಕ ಉದ್ಘಾಟಿಸಿದರು. ಇದಲ್ಲದೆ, ನಾಲ್ಕು ನಗರಗಳಿಗೆ 'ಪಿಎಂ ಇ-ಬಸ್' ಸೇವಾ ಯೋಜನೆಯಡಿ ಒದಗಿಸಲಾದ ೨೨೫ ಎಲೆಕ್ಟ್ರಿಕ್ ಬಸ್‌ಗಳ ಸೇವೆಗೆ ಚಾಲನೆ ನೀಡಿದರು. ಗುವಾಹತಿ ೧೦೦, ನಾಗ್‌ಪುರ ಮತ್ತು ಭಾವ್‌ನಗರ ತಲಾ ೫೦ ಹಾಗೂ ಚಂಡೀಗಢ ೨೫ ಬಸ್‌ಗಳನ್ನು ಪಡೆದುಕೊಂಡಿವೆ. ಇದಕ್ಕೂ ಮುನ್ನ ಪ್ರಧಾನಿ ಅವರು, ಮೊರಾನ್ ಬೈಪಾಸ್‌ನಲ್ಲಿ ನಿರ್ಮಿಸಲಾದ ತುರ್ತು, ವಿಮಾನ ಇಳಿದಾಣ ಸೌಲಭ್ಯವನ್ನು ಉದ್ಘಾಟಿಸಿದರು. ದಿಬ್ರುಗಢ್ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಸುಮಾರು ನೂರು ಕೋಟಿ ರೂಪಾಯಿ ವೆಚ್ಚದಲ್ಲಿ ಈ ಸೌಲಭ್ಯ ಕಲ್ಪಿಸಲಾಗಿದೆ. ಪ್ರಧಾನಿ ಅವರು ಇದೇ ಸಂದರ್ಭದಲ್ಲಿ ಯುದ್ಧ ವಿಮಾನ, ಸಾರಿಗೆ ವಿಮಾನ ಹಾಗೂ ಹೆಲಿಕಾಪ್ಟರ್‌ಗಳ ವೈಮಾನಿಕ ಪ್ರದರ್ಶನವನ್ನು ವೀಕ್ಷಿಸಿದರು. ನಂತರ ಪ್ರಧಾನಿ ಅವರು, 'ಬೂತ್ ವಿಜಯ ಸಂಕಲ್ಪ ಸಭಾ'ದಲ್ಲಿ ಮಾತನಾಡಿ, ಕಳೆದ ಹನ್ನೊಂದು ವರ್ಷಗಳಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಈಶಾನ್ಯ ವಲಯದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದರು. ಕಾಂಗ್ರೆಸ್ ಆಳ್ವಿಕೆಯಲ್ಲಿ ಈ ವಲಯ ಅಲಕ್ಷ್ಯಕ್ಕೆ ಗುರಿಯಾಗಿತ್ತು ಎಂದು ಅವರು ಟೀಕಿಸಿದರು. ಕಳೆದ ಹನ್ನೊಂದು ವರ್ಷಗಳಲ್ಲಿ ಈಶಾನ್ಯ ವಲಯಕ್ಕಾಗಿ ೫.೫ ಲಕ್ಷ ಕೋಟಿ ರೂಪಾಯಿಗೂ ಅಧಿಕ ಹಣವನ್ನು ಒದಗಿಸಲಾಗಿದೆ. ಇದು ಈ ಭಾಗದಲ್ಲಿ ಅಭಿವೃದ್ಧಿ ಹೊಂದಿರುವ ಮೂಲಸೌಕರ್ಯಗಳಿಂದ ವ್ಯಕ್ತವಾಗಿದೆ ಎಂದು ತಿಳಿಸಿದರು. ಈಶಾನ್ಯ ವಲಯದಲ್ಲಿ ಯುವಜನತೆಗೆ ಉದ್ಯೋಗಾವಕಾಶ ಕಲ್ಪಿಸುವ ಸಂಪರ್ಕ ಹಾಗೂ ಮೂಲಸೌಕರ್ಯ ಸುಧಾರಣಾ ಯೋಜನೆಗಳನ್ನು

ತರಲು ಸರ್ಕಾರ ಶ್ರಮಿಸುತ್ತಿದೆ ಎಂದು ಹೇಳಿದರು. ೨೦೨೬-೨೭ನೇ ಹಣಕಾಸು ವರ್ಷದ ತೆರಿಗೆ ಹಂಚಿಕೆಯಲ್ಲಿ ಅಸ್ಸಾಂಗಾಗಿ ೪೯ ಸಾವಿರದ ೭೨೫ ಕೋಟಿ ರೂಪಾಯಿ ದಾಖಲೆಯ ಪ್ರಮಾಣದ ಹಣವನ್ನು ನಿಗದಿಪಡಿಸಲಾಗಿದೆ ಎಂದು ಅವರು ಹೇಳಿದರು. ಅಸ್ಸಾಂ ಸೇರಿದಂತೆ ಈಶಾನ್ಯ ವಲಯದ ರಾಜ್ಯಗಳನ್ನು ಅವರು, ಭಾರತದ ಅಷ್ಟಲಕ್ಷ್ಮಿಯವರು ಎಂದು ಬಣ್ಣಿಸಿದರು.

<>><><*><><<>

ನವೋದ್ಯಮ ಪರಿಸರಕ್ಕೆ ಒತ್ತಾಸೆ ನೀಡಲು ಒಟ್ಟು ೧೦ ಸಾವಿರ ಕೋಟಿ ರೂಪಾಯಿ ನಿಧಿಯ 'ಸ್ಟಾರ್ಟ್‌ಅಪ್ ಇಂಡಿಯಾ ಫಂಡ್ ಆಫ್ ಫಂಡ್ಸ್-೨.೦' ಸ್ಥಾಪಿಸಲು ಕೇಂದ್ರ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ. ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ನಿನ್ನೆ ಸೌತ್ ಬ್ಲಾಕ್‌ನಲ್ಲಿ ನಡೆದ ಸಚಿವ ಸಂಪುಟದ ನಿರ್ಧಾರಗಳನ್ನು ಇಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಈ ನಿಧಿ ನವೋದ್ಯಮಗಳಿಗೆ ವೆಂಚರ್ ಕ್ಯಾಪಿಟಲ್ ಕ್ರೋಡೀಕರಿಸಲು ನೆರವಾಗುತ್ತದೆ. ದೀರ್ಘಾವಧಿಯ ದೇಶೀಯ ಬಂಡವಾಳ ಪರಿಸರ ಬಲವರ್ಧನೆ ನಾವೀನ್ಯತೆ ನೇತೃತ್ವದ ಉದ್ಯಮಶೀಲತೆಯನ್ನು ಬೆಂಬಲಿಸಲು, ಈ ನವೋದ್ಯಮ ಯೋಜನೆಯನ್ನು ರೂಪಿಸಲಾಗಿದೆ. ಸಚಿವ ಸಂಪುಟದ ಮುಂದಿನ ಸಭೆಗಳು ಸೇವಾ ತೀರ್ಥದಲ್ಲಿಯೇ ನಡೆಯಲಿವೆ ಎಂದು ಸಚಿವ ಅಶ್ವಿನಿ ವೈಷ್ಣವ್ ಈ ಸಂದರ್ಭದಲ್ಲಿ ಪ್ರಕಟಿಸಿದರು. ಒಟ್ಟು ಒಂದು ಲಕ್ಷ ಕೋಟಿ ರೂಪಾಯಿ ಕೇಂದ್ರೀಯ ನೆರವಿನಿಂದ ನಗರ ಸವಾಲು ನಿಧಿ ಸ್ಥಾಪಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಯೋಜನಾ ವೆಚ್ಚದ ಅರ್ಧದಷ್ಟನ್ನು ಮಾರುಕಟ್ಟೆಯಿಂದ ಸಂಗ್ರಹಿಸಬೇಕಾಗಿದ್ದು, ವೆಚ್ಚದ ಶೇಕಡಾ ೨೫ರಷ್ಟನ್ನು ಕೇಂದ್ರ ಸರ್ಕಾರ ನೆರವಿನ ರೂಪದಲ್ಲಿ ಒದಗಿಸಲಿದೆ. ಇದರಿಂದಾಗಿ ಮುಂದಿನ ಐದು ವರ್ಷಗಳಲ್ಲಿ ನಗರ ವಲಯದಲ್ಲಿ ಒಟ್ಟು ನಾಲ್ಕು ಲಕ್ಷ ಕೋಟಿ ರೂಪಾಯಿ ಬಂಡವಾಳ ಹೂಡಿಕೆ ನಿರೀಕ್ಷಿಸಲಾಗಿದೆ. ಇದರಿಂದಾಗಿ ದೇಶಗಳ ನಗರಪ್ರದೇಶಗಳ ಅಭಿವೃದ್ಧಿಯಾಗಲಿದೆ.

<>><><*><><<>

ಕರ್ನಾಟಕ, ದೆಹಲಿ, ಹರಿಯಾಣ, ಮಹಾರಾಷ್ಟ್ರ ರಾಜ್ಯಗಳ ೧೨ ಜಿಲ್ಲೆಗಳಲ್ಲಿ ರೈಲ್ವೆ ಜಾಲಗಳನ್ನು ಸುಮಾರು ೩೮೯ ಕಿಲೋಮೀಟರ್‌ಗಳಷ್ಟು ವಿಸ್ತರಿಸುವ ಮೂರು ಬಹುಮಾರ್ಗದ ಯೋಜನೆಗಳಿಗೆ ಆರ್ಥಿಕ ವ್ಯವಹಾರ ಕುರಿತಾದ ಕೇಂದ್ರ ಸಂಪುಟ ಸಮಿತಿ ಒಪ್ಪಿಗೆ ನೀಡಿದೆ. ಸುಮಾರು ೧೮ ಸಾವಿರದ ೫೦೯ ಕೋಟಿ ರೂಪಾಯಿ ಅಂದಾಜು ವೆಚ್ಚದ ಈ ಯೋಜನೆಗಳನ್ನು ೨೦೩೦-೩೧ ರ ವೇಳೆಗೆ ಪೂರ್ತಿಗೊಳಿಸಲು ಉದ್ದೇಶಿಸಲಾಗಿದೆ. ಬಳ್ಳಾರಿ- ಹೊಸಪೇಟೆ ಮೂರು ಮತ್ತು ನಾಲ್ಕನೇ ಮಾರ್ಗ ಕೂಡ ಇದರಲ್ಲಿ ಸೇರಿದೆ. ಈ ಯೋಜನೆಯ ನಿರ್ಮಾಣ ಕಾಮಗಾರಿ ಸಂದರ್ಭದಲ್ಲಿ ಸುಮಾರು ೨೬೫ ಲಕ್ಷ ಮಾನವ ದಿನಗಳ ನೇರ ಉದ್ಯೋಗ ಸೃಷ್ಟಿಯಾಗಲಿದೆ. ಈ ಉಪಕ್ರಮದಿಂದ ಪ್ರಯಾಣಿಕರಿಗೆ ಅನುಕೂಲವಾಗುವುದಲ್ಲದೆ, ಸಾಗಾಟ ವೆಚ್ಚ ಹಾಗೂ ತೈಲ ಆಮದಿನಲ್ಲಿ ಕಡಿತ, ಇಂಗಾಲದ ಡೈ ಆಕ್ಸೈಡ್ ಹೊರಸೂಸುವಿಕೆಯೂ ಕೂಡ ಕಡಿಮೆಯಾಗಲಿದೆ. ಅಸ್ಸಾಂನ ಗೋಹಪುರದಿಂದ ನುಮಲಿಗಢ್‌ಗೆ ಸಂಪರ್ಕ ಕಲ್ಪಿಸುವ ನಾಲ್ಕು ಮಾರ್ಗಗಳ ಹಸಿರು ವಲಯ ನಿರ್ಮಾಣ, ಗುಡೆಬೆಲ್ಲೂರಿನಿಂದ ಮಹಬೂಬ್ ನಗರದ ನಡುವಿನ ರಾಷ್ಟ್ರೀಯ ಹೆದ್ದಾರಿ-೧೬೭ ರ ಅಗಲೀಕರಣಕ್ಕೂ ಸಂಪುಟ ಸಮಿತಿ ಸಮ್ಮತಿ ನೀಡಿದೆ.

<>><><*><><<>

ಭಾರತ, ಒಟ್ಟು ದೇಶೀಯ ಉತ್ಪನ್ನದ ಶೇಕಡಾ ೫.೬ ರಷ್ಟು ಹಣವನ್ನು ವೆಚ್ಚಮಾಡುವ ಮೂಲಕ ಹವಾಮಾನ ಸಕ್ರಿಯತೆಗೆ ಬದ್ಧತೆ ವ್ಯಕ್ತಪಡಿಸಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಅವರು ಜರ್ಮನಿಯ ಮ್ಯೂನಿಕ್‌ನಲ್ಲಿಂದು ಹವಾಮಾನ ಭದ್ರತೆ ಕುರಿತಾದ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿ, ಆರು ವರ್ಷಗಳ ಹಿಂದೆ ಭಾರತ, ಹವಾಮಾನ ಸಕ್ರಿಯತೆಗೆ ಒಟ್ಟು ದೇಶೀಯ ಉತ್ಪನ್ನದ ಶೇಕಡಾ ೩.೭ ರಷ್ಟು ಹಣವನ್ನು ವಿನಿಯೋಗಿಸುತ್ತಿತ್ತು ಎಂದರು. ಭಾರತ, ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಬಂಡವಾಳ ಹೂಡುವುದನ್ನು ಮುಂದುವರಿಸಲಿದೆ. ೨೦೨೬-೨೭ರ ಸಾಲಿನ ಕೇಂದ್ರ ಬಜೆಟ್‌ನಲ್ಲಿ ಇಂಗಾಲ ಹಿಡಿದಿಟ್ಟುಕೊಳ್ಳುವ ಕಾರ್ಯತಂತ್ರಕ್ಕೆ ಹಣ ಒದಗಿಸಲಾಗಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದರು.

<>><><*><><<>

ಹಣಕಾಸು ಹಾಗೂ ಕಾರ್ಪೊರೇಟ್ ವ್ಯವಹಾರ ಖಾತೆ ಸಚಿವೆ ನಿರ್ಮಲಾ ಸೀತಾರಾಮನ್ ಅವರು, ಮ್ಯೂನಿಕ್ ಭದ್ರತಾ ಅಧಿವೇಶನದ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲು ಇಂದು ಜರ್ಮನಿ ತಲುಪಿದರು. ಮ್ಯೂನಿಕ್‌ನಲ್ಲಿರುವ ಭಾರತದ ಕೌನ್ಸಿಲ್ ಜನರಲ್ ಶತ್ರುಘ್ನ ಸಿನ್ಹಾ, ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಮ್ಯೂನಿಕ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು. ಜಾಗತಿಕ ಆರ್ಥಿಕತೆ ಹಾಗೂ ಕಾರ್ಯತಂತ್ರ ವಿಚಾರಗಳ ಬಗ್ಗೆ ಪ್ರಮುಖವಾಗಿ ನಡೆಯಲಿರುವ ಚರ್ಚೆಯಲ್ಲಿ ನಿರ್ಮಲಾ ಸೀತಾರಾಮನ್ ಅವರು ಭಾಗವಹಿಸಲಿದ್ದಾರೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ. ಹಣಕಾಸು ಸಚಿವರು ಈ ಸಂದರ್ಭದಲ್ಲಿ ವಿವಿಧ ದೇಶಗಳ ಹಣಕಾಸು ಸಚಿವರೊಂದಿಗೆ ಪರಸ್ಪರ ಹಿತಾಸಕ್ತಿಯ ಹಾಗೂ ಆರ್ಥಿಕ ಸಹಕಾರ ಬಲಗೊಳಿಸುವ ದ್ವಿಪಕ್ಷೀಯ ಮಾತುಕತೆ ನಡೆಸುವ ನಿರೀಕ್ಷೆಯಿದೆ.

<>><><*><><<>

ಸಾಲಿನ ಕೇಂದ್ರ ಬಜೆಟ್ ವಿಕಸಿತ ಭಾರತದ ಸುಭದ್ರವಾದ ಅಡಿಪಾಯವಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಖಾತೆ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಮುಂಬೈನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಜೆಟ್ ಆರ್ಥಿಕ ಬೆಳವಣಿಗೆ, ಮೂಲಸೌಕರ್ಯ ವಿಸ್ತರಣೆ ಹಾಗೂ ಎಲ್ಲ ನಾಗರಿಕರನ್ನು ಒಳಗೊಂಡ ಅಭಿವೃದ್ಧಿಗಾಗಿ ರೂಪಿಸಲಾಗಿರುವ ನೀಲ ನಕ್ಷೆಯಾಗಿದೆ ಎಂದರು. ಬಜೆಟ್‌ನಲ್ಲಿ ತಯಾರಿಕಾ ವಲಯ, ರಫ್ತು ಹಾಗೂ ಬಂಡವಾಳ ಹೂಡಿಕೆ ಸ್ನೇಹಿ, ಪರಿಸರ ನಿರ್ಮಾಣಕ್ಕೆ ಒತ್ತು ನೀಡಲಾಗಿದೆ. ಮೂಲಸೌಕರ್ಯ ಅಭಿವೃದ್ಧಿಗಾಗಿ ೧೨.೨೧ ಲಕ್ಷ ಕೋಟಿ ರೂಪಾಯಿ ನಿಗದಿಪಡಿಸಲಾಗಿದೆ. ಸಾಗಾಟ ವೆಚ್ಚವನ್ನು ಕಡಿಮೆಗೊಳಿಸಿ ಆರ್ಥಿಕತೆಗೆ ಒತ್ತು ನೀಡುವುದು ಇದರ ಉದ್ದೇಶವಾಗಿದೆ. ಸಣ, ಅತಿ ಸಣ್ಣ ಹಾಗೂ ಮಧ್ಯಮ ಗಾತ್ರದ ಉದ್ದಿಮೆಗಳಿಗಾಗಿ ೧೦ ಸಾವಿರ ಕೋಟಿ ರೂಪಾಯಿ ಹಂಚಿಕೆ ಮಾಡಲಾಗಿದೆ ಎಂದು ಅವರು ತಿಳಿಸಿದರು.

<>><><*><><<>

ಬಾಂಗ್ಲಾದೇಶದಲ್ಲಿ ಕಾನೂನು ಸುವ್ಯವಸ್ಥೆಯ ಪಾಲನೆ ಮುಂಬರುವ ಸರ್ಕಾರದ ಅಗ್ರಮಾನ್ಯ ಆದ್ಯತೆಯಾಗಿರುತ್ತದೆ ಎಂದು ಬಾಂಗ್ಲಾದೇಶ ನ್ಯಾಷನಲಿಸ್ಟ್ ಪಾರ್ಟಿಯ ತಾರಿಖ್ ರಹಮಾನ್ ಹೇಳಿದ್ದಾರೆ. ಅವರು, ೧೩ನೇ ಸಂಸದೀಯ ಚುನಾವಣೆಯಲ್ಲಿ ತಮ್ಮ ಪಕ್ಷ ಭಾರೀ ಜಯ ಸಾಧಿಸಿದ ನಂತರ ಢಾಕಾದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಯಾವುದೇ ಅರಾಜಕತೆಯನ್ನು ಸಹಿಸಲಾಗುವುದಿಲ್ಲ ಎಂದು ಎಚ್ಚರಿಕೆ ನೀಡಿದರು. ಈ ಮಧ್ಯೆ ಸಂಪುಟ ಕಾರ್ಯದರ್ಶಿ ಶೇಖ್ ಅಬ್ದುರ್ ರಶೀದ್ ಮಾತನಾಡಿ, ನೂತನ ಸಚಿವ ಸಂಪುಟ ಹಾಗೂ ಸಂಸದರು ಬರುವ ಬುಧವಾರದ ವೇಳೆಗೆ ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ತಿಳಿಸಿದ್ದಾರೆ.

<>><><*><><<>

ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ದಿನದ ಮೊದಲೆರಡು ಪಂದ್ಯಗಳಲ್ಲಿಂದು ಐರ್ಲೆಂಡ್ ಮತ್ತು ಇಂಗ್ಲೆಂಡ್ ಜಯಗಳಿಸಿವೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದಿರುವ ಮೂರನೇ ಪಂದ್ಯದಲ್ಲಿ ನ್ಯೂಜಿಲೆಂಡ್ ಮತ್ತು ದಕ್ಷಿಣ ಆಫ್ರಿಕಾ ತಂಡಗಳು ಮುಖ್ಯಾಮುಖಿಯಾಗಿವೆ. ಟಾಸ್ ಗೆದ್ದ ದಕ್ಷಿಣ ಆಫ್ರಿಕಾ ಬೌಲಿಂಗ್ ಆಯ್ದುಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ನ್ಯೂಜಿಲೆಂಡ್, ಇತ್ತೀಚಿನ ವರದಿ ಬಂದಾಗ ೫.೫ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೫೮ ರನ್ ಮಾಡಿ ಆಡುತ್ತಿದೆ.  ಕೊಲಂಬೋದ ಸಿನ್ಹಳೀಸ್ ಸ್ಪೋರ್ಟ್ಸ್ ಕ್ಲಬ್ ಕ್ರೀಡಾಂಗಣದಲ್ಲಿಂದು ನಡೆದ ಇಂದಿನ ಮೊದಲ ಪಂದ್ಯದಲ್ಲಿ ಐರ್ಲೆಂಡ್, ಒಮನ್ ತಂಡವನ್ನು ೯೬ ರನ್‌ಗಳಿಂದ ಪರಾಭವಗೊಳಿಸಿತು. ಕೋಲ್ಕತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ನಡೆದ ಎರಡನೇ ಪಂದ್ಯದಲ್ಲಿ ಸ್ಕಾಟ್‌ಲ್ಯಾಂಡ್ ವಿರುದ್ಧ ಇಂಗ್ಲೆಂಡ್ ೫ ವಿಕೆಟ್‌ಗಳಿಂದ ಜಯ ಸಾಧಿಸಿತು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>